ಶ್ರೀರಂಗಪಟ್ಟಣದಲ್ಲಿರುವ ಶ್ರೀ ನಿಮಿಷಾಂಬ ದೇವಾಲಯ ಅಭಿವೃದ್ಧಿ

1191(1919) ಶ್ರೀ ಎಂ.ಎಸ್.ಆತ್ಮಾನಂದ(ಮಂಡ್ಯ) : ಮಾನ್ಯ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1. ಶ್ರೀ ರಂಗಪಟ್ಟಣದ ಸಮೀಪ ಇರುವ ಶ್ರೀ ನಿಮಿಷಾಂಬ ದೇವಾಲಯಕ್ಕೆ ಬರುತ್ತಿರುವ ಅಪಾರ ಸಂಖ್ಯೆಯ ಭಕ್ತರಿಗೆ ಅನುಕೂಲವಾಗುವಂತೆ ದೇವಾಲಯದ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಬೇಕಾದ ಅವಶ್ಯಕತೆಯನ್ನು ಸರಕಾರ ಮನಗೊಂಡಿದೆಯೇ?

2. ಹಾಗಿದ್ದಲ್ಲಿ, ಈ ದೇವಾಲಯದ ಸಮಗ್ರ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ಅಥವಾ ವಿಶೇಷ ಯೋಜನೆ ರೂಪಿಸಲಾಗಿದೆಯೇ?

3. ಮಾಡಲಾಗಿದ್ದಲ್ಲಿ, ಇದರ ವಿವರಗಳೇನು?

4. ಅಭಿವೃದ್ಧಿ ಯೋಜನೆಯ ಕಾರ್ಯ ಯಾವಾಗ ಆರಂಭವಾಗುವುದು?

ಶ್ರೀಮತಿ ಸುಮಾ ವಸಂತ್ (ಮುಜರಾಯಿ ರಾಜ್ಯ ಸಚಿವರು):

1. ಹೌದು.

2. ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಉದ್ದೇಶಿಸಿದ್ದು, ಮಾಸ್ಟರ್ ಪ್ಲಾನ್ ತಯಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

3. ದೇವಾಲಯದ ವತಿಯಿಂದ ದೇವಾಲಯದ ಒಳಭಾಗದ ಅಭಿವೃದ್ಧಿ ಕಾಮಗಾರಿಗಳನ್ನು ರೂ.45.00 ಲಕ್ಷಗಳಲ್ಲಿ ಕೈಗೊಳ್ಳಲಾಗುತ್ತಿವೆ. ಇದಲ್ಲದೆ, ದೇವಸ್ಥಾನಕ್ಕೆ ಮತ್ತು ಸೋಪಾನಘಟಕ್ಕೆ ಪ್ರತ್ಯೇಕ ರಸ್ತೆ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಹಾಗೂ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.

1) ಕುಡಿಯುವ ನೀರಿನ ವ್ಯವಸ್ಥೆ
2) ಶೌಚಾಲಯ ವ್ಯವಸ್ಥೆ
3) ಭೋಜನ ಶಾಲೆ ನಿರ್ಮಾಣ
4) ಕ್ಯೂ ಶೆಲ್ಟರ್
5) ಗೋಪುರ ಕಳಸ ಸ್ಥಾಪನೆ
6) ಕುಂಬಾಭಿಷೇಕ
7) ಧ್ವಜಸ್ಥಂಬ ಸ್ಥಾಪನೆ

4. ಈ ದೇವಾಲಯದ ಆಡಳಿತ ವಿಚಾರದಲ್ಲಿ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠದಲ್ಲಿ ವಿಚಾರಣೆ ನಡೆದು ರಾಜ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಮಾನ್ಯ ಕಂದಾಯ ಕಾರ್ಯದರ್ಶಿರವರ ನ್ಯಾಯಾಲಯದಲ್ಲಿ ಪ್ರಕರಣ ನಡೆಯುತ್ತಿದ್ದು, ಈ ಅಂಶಗಳನ್ನು ಗಮನದಲ್ಲಿಟ್ಟು ಹಂತ ಹಂತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.

ಹಾವೇರಿ ಜಿಲ್ಲಾ ಆಡಳಿತ ಕಛೇರಿಗೆ ಕಟ್ಟಡ ನಿರ್ಮಾಣ ಮಾಡುವುದು

1193(769) ಶ್ರೀ ಬನ್ನಿಕೋಡ್ ಬಿ.ಹೆಚ್.(ಹಿರೇಕೆರೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಾವೇರಿ ಜಿಲ್ಲೆಯಾಗಿ ಐದು ವರ್ಷ ಕಳೆದಿದ್ದರೂ ಜಿಲ್ಲಾಡಳಿತಕ್ಕೆ ಸೂಕ್ತ ಕಟ್ಟಡವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?